## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1152 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 15.12.2023 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಜಾತಿ ಜನಗಣತಿ ಸಮೀಕ್ಷೆಯನ್ನು ಕೈಗೊಳ್ಳಲಾಗಿದೆಯೇ; ಕೈಗೊಂಡಿದ್ದಲ್ಲಿ ಪ್ರಸ್ತುತ ಹಂತವನ್ನು ತಿಳಿಸುವುದು. | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ 2015ನೇ ಸಾಲಿನಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015ನ್ನು ಕೈಗೊಳ್ಳಲಾಗಿರುತ್ತದೆ.<br><br>ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015ರ ವರದಿಯನ್ನು ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ. |
| ಆ) | ರಾಜ್ಯದಲ್ಲಿ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಯನ್ನು ಕೈಗೊಳ್ಳಲಾಗಿದೆಯೇ; ಕೈಗೊಂಡಿದ್ದಲ್ಲಿ ಈಗಿನ ಹಂತವನ್ನು ತಿಳಿಸುವುದು; | |
| ಇ) | ಹಿಂದುಳಿದ ಆಯೋಗದ ನಿಯಮಾವಳಿಯ ಪ್ರಕಾರ ಪ್ರತಿ 10 ವರ್ಷಕ್ಕೊಮ್ಮೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಕೈಗೊಳ್ಳಬೇಕಾಗಿರುವುದು ನಿಜವೇ; ನಿಜವಾಗಿದ್ದಲ್ಲಿ, ಸುಮಾರು 9 ವರ್ಷಗಳ ಹಳೆಯ ಅಂಕಿ ಅಂಶಗಳ ಆಧಾರದ ಮೇಲೆ ಸಾಮಾಜಿಕ ಮತ್ತು ಶೈಕ್ಷಣಿಕ ವರದಿಯನ್ನು ನೀಡಬಹುದೇ? | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ, 1995 ರ ಕಲಂ 9 (1) (ii)ಪ್ರಕಾರ ಹಿಂದುಳಿದ ವರ್ಗಗಳಿಗೆ ಸೇರಿದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಮತ್ತು ಸಮಸ್ಯೆಗಳ ಬಗ್ಗೆ ಸರ್ವೆ ಮಾಡಲು ಹಾಗೂ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ 1995ರ ಕಲಂ 11 (1)ರ ಪ್ರಕಾರ ರಾಜ್ಯ ಸರ್ಕಾರದಿಂದ ಪಟ್ಟಿಗಳ ನಿಯತಕಾಲಿಕ ಪರಿಷ್ಕರಣೆಯನ್ನು ಪ್ರತಿ 10 ವರ್ಷಗಳಿಗೊಮ್ಮೆ ಕೈಗೊಳ್ಳಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ.<br><br>ಅದರಂತೆ, ರಾಜ್ಯ ಸರ್ಕಾರದ ಆದೇಶದನ್ವಯ 2015ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಕೈಗೊಳ್ಳಲಾಗಿರುತ್ತದೆ. |
| ಈ) | ಸದರಿ ಜಾತಿಗಣತಿಯ ವರದಿಯ ಅನುಷ್ಠಾನದ ಬಗ್ಗೆ ಸರ್ಕಾರದ ನಿಲುವೇನು? | ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015ರ ವರದಿಯನ್ನು ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ. |

**ಸಂಖ್ಯೆ:** ಹಿಂವಕ 306 ಬಿಸಿಎ 2023

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.